ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080–22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು–560001.

ಸಂಖ್ಯೆ: ಕಾಶಿಇ/ಶೈಪಿ/28/ಎನ್‌ಎಸ್‌ಎಸ್/2017–18

ದಿನಾಂಕ: 17.02.2018.

## ಸುತ್ತೋಲೆ

ವಿಷಯ: 2017–18ನೇ ಸಾಲಿನ N.S.S.-ETI ತರಬೇತಿ ಕಾರ್ಯಕ್ರಮಕ್ಕೆ ಎನ್.ಎಸ್.ಎಸ್. ಅಧಿಕಾರಿಗಳನ್ನು ನಿಯೋಜಿಸುವ ಬಗ್ಗೆ.

ಉಲ್ಲೇಖ: ರಾಜ್ಯ ಎನ್.ಎಸ್.ಎಸ್. ಅಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ರಾಷ್ಟ್ರೀಯ ಸೇವಾ ಯೋಜನಾ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ರವರ ಕಛೇರಿ ಪತ್ರ ಸಂಖ್ಯೆ:ಯುಸೇಇ/ರಾಸೇಯೋ/14/ 2017–18/432 ದಿನಾಂಕ:12.02.2018.

* * * * * *

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಡ್ಡಾಯವಾಗಿ ಎನ್.ಎಸ್.ಎಸ್. ಘಟಕಗಳನ್ನು ಸ್ಥಾಪಿಸಿ ನಡೆಸುವುದು ಹಾಗೂ ಈ ಘಟಕಗಳನ್ನು ನಡೆಸಲು ತರಬೇತಿ ಪಡೆದ ಅಧ್ಯಾಪಕರುಗಳನ್ನು ಎನ್.ಎಸ್.ಎಸ್. ಅಧಿಕಾರಿಯನ್ನಾಗಿ ನಿಯೋಜಿಸುವುದು ಕಡ್ಡಾಯವಾಗಿರುತ್ತದೆ. ಕೆಲವು ಕಾಲೇಜುಗಳಲ್ಲಿ ತರಬೇತಿ ಪಡೆಯದ ಅಧ್ಯಾಪಕರನ್ನೇ ಕಾಲೇಜಿನ ಎನ್.ಎಸ್.ಎಸ್. ಅಧಿಕಾರಿಯನ್ನಾಗಿ ನಿಯೋಜಿಸುತ್ತಿರುವುದು ಕಂಡು ಬಂದಿರುವ ಹಿನ್ನಲೆಯಲ್ಲಿ ಎನ್.ಎಸ್.ಎಸ್. ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಹೋಗಲು N.S.S.-ETI ತರಬೇತಿಯನ್ನು ನಡೆಸಲಾಗುತ್ತಿದೆ.

ಪ್ರತಿ ಕಾಲೇಜಿನಲ್ಲಿ ಎನ್.ಎಸ್.ಎಸ್. ಘಟಕವನ್ನು ನಡೆಸಲು ಎನ್.ಎಸ್.ಎಸ್. ತರಬೇತಿ ಪಡೆದ ಒಬ್ಬ ಪುರುಷ ಮತ್ತು ಮಹಿಳಾ ಅಧ್ಯಾಪಕರುಗಳು ಇರುವುದು ಕಡ್ಡಾಯವಾಗಿರುವ ಹಿನ್ನಲೆಯಲ್ಲಿ ಇಲಾಖಾ ವ್ಯಾಪ್ತಿಯ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಈಗಾಗಲೇ ತರಬೇತಿ ಪಡೆದ ಪುರುಷ / ಮಹಿಳಾ ಎನ್.ಎಸ್.ಎಸ್. ಅಧಿಕಾರಿಗಳು ಇದ್ದಲ್ಲಿ, ಸದರಿ ಕಾಲೇಜುಗಳಿಂದ ಮತ್ತೊರ್ವ ಪುರುಷ / ಮಹಿಳಾ ಅಧ್ಯಾಪಕರೊಬ್ಬರನ್ನು ಎನ್.ಎಸ್.ಎಸ್. ತರಬೇತಿಗೆ ನಿಯೋಜಿಸಬೇಕಾಗಿರುತ್ತದೆ.

ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, Mysore (N.S.S.-ETI) ಇಲ್ಲಿ ದಿನಾಂಕ:24.02.2018 ರಿಂದ 02.03.2018 ರವರೆಗೆ ಎನ್.ಎಸ್.ಎಸ್ ಇ.ಟಿ.ಐ.ದಲ್ಲಿ ಆಯೋಜಿಸಲಾಗಿರುವ ತರಬೇತಿ ಕಾರ್ಯಕ್ರಮಕ್ಕೆ ಹಾಜರಾಗಲು ತರಬೇತಿ ಪಡೆಯದೇ ಇರುವ ಎನ್.ಎಸ್.ಎಸ್. ಅಧಿಕಾರಿ ಅಥವಾ ಸದರಿ ಎನ್.ಎಸ್.ಎಸ್. ಅಧಿಕಾರಿಯು ಈಗಾಗಲೇ ತರಬೇತಿ ಪಡೆದಿದ್ದಲ್ಲಿ ಮತ್ತೊರ್ವ ಪುರುಷ / ಮಹಿಳಾ ಅಧ್ಯಾಪಕರೊಬ್ಬರನ್ನು ಕಡ್ಡಾಯವಾಗಿ ನಿಯೋಜಿಸುವಂತೆ ಸೂಚಿಸಲಾಗಿದೆ. ಸದರಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಗ್ಗೆ ಹಾಜರಾತಿ ಪ್ರಮಾಣ ಪತ್ರವನ್ನು ಪ್ರಾಂಶುಪಾಲರಿಗೆ ಒಪ್ಪಿಸುವ ನಿಬಂಧನೆಗೊಳಪಟ್ಟು ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡಲಾಗಿದೆ.

ಸೂಚನೆಗಳು:

1) ಸದರಿ ತರಬೇತಿಗೆ ಹಾಜರಾಗಲು ಪ್ರಾಂಶುಪಾಲರು ಕಾಲೇಜಿನಿಂದ ಬಿಡುಗಡೆ ಮಾಡಿರುವ ಬಗ್ಗೆ ಆದೇಶದ ಪ್ರತಿಯನ್ನು ಕಡ್ಡಾಯವಾಗಿ ತರಬೇತಿಗೆ ತೆಗೆದುಕೊಂಡು ಹೋಗುವುದು.
2) ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಲಿಚ್ಛಿಸುವ ಅಧ್ಯಾಪಕರುಗಳು ದಿನಾಂಕ: 22.02.2018 ಒಳಗಾಗಿ ಫೋನ್ ಮೂಲಕ ನೋಂದಾಯಿಸಲು ಸೂಚಿಸಿದೆ.
3) ತರಬೇತಿ ಕಾರ್ಯಕ್ರಮವು ಈ ಮೇಲೆ ತಿಳಿಸಿರುವ ದಿನಾಂಕಗಳಂದು ಬೆಳಗ್ಗೆ 9.00 ಗಂಟೆಯಿಂದಲೇ ಪ್ರಾರಂಭವಾಗುವುದರಿಂದ ತರಬೇತಿ ಕಾರ್ಯಕ್ರಮವು ಪ್ರಾರಂಭವಾಗುವ ಹಿಂದಿನ ದಿನವೇ ಸಾಯಂಕಾಲ 5:00 ಗಂಟೆಯೊಳಗಾಗಿ .Dr. Chandrashekar Gowda, ಸಂಯೋಜನಾಧಿಕಾರಿ, KSOU, ಎನ್.ಎಸ್.ಎಸ್ ಘಟಕ, Mobile:9449668997, ಇವರಲ್ಲಿ ವರದಿ ಮಾಡಿಕೊಳ್ಳುವುದು. ತರಬೇತಿ ಕಾರ್ಯಕ್ರಮವು ಪ್ರಾರಂಭವಾಗುವ ದಿನಾಂಕದಂದು ಬೆಳಗ್ಗೆ 9:00 ಗಂಟೆಯ ನಂತರ ಬಂದವರನ್ನು ತರಬೇತಿಗೆ ಸೇರಿಸಿಕೊಳ್ಳಲಾಗುವುದಿಲ್ಲ.
4) ತರಬೇತಿ ಅವಧಿಯಲ್ಲಿ ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿಗಳು ವಾಸ್ತವ್ಯ ಮಾಡಲು ಎನ್.ಎಸ್.ಎಸ್. ಭವನದಲ್ಲಿ ವ್ಯವಸ್ಥೆ ಮಾಡಲಾಗಿರುತ್ತದೆ.
5) ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿಗಳು ಪಾಸ್‌ಪೋರ್ಟ್ ಅಳತೆಯ ಎರಡು ಭಾವ ಚಿತ್ರಗಳನ್ನು ಕಡ್ಡಾಯವಾಗಿ ತೆಗೆದುಕೊಂಡು ಹೋಗುವುದು.

*(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)*

**ಕಾಲೇಜು ಶಿಕ್ಷಣ ನಿರ್ದೇಶಕರು.**

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಹಾಗೂ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ) ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4. ಶ್ರೀ ಆರ್. ಶ್ರೀಕಾಂತ್, ನೋಡಲ್ ಅಧಿಕಾರಿ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.

ಪ್ರತಿಯನ್ನು:

1. ಡಾ. ಗಣನಾಥ ಶೆಟ್ಟಿ, ರಾಜ್ಯ ಎನ್.ಎಸ್.ಅಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ರಾ.ಸೇ.ಯೋ. ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಶ್ರೀ ಅರುಣ್ ಪೂಜಾರ್, ಎನ್. ಎಸ್.ಎಸ್. ಪ್ರಾದೇಶಿಕ ನಿರ್ದೇಶಕರು, ಬೆಂಗಳೂರು.
3. ಕುಲಸಚಿವರು / ಎನ್.ಎಸ್.ಎಸ್. ಸಮನ್ವಯಾಧಿಕಾರಿ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ,, ಮೈಸೂರು.
4. ಕಛೇರಿ ಪ್ರತಿ.